ಇ) ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಮಾಹಿತಿ ಹಕ್ಕು ವಿಧೇಯಕ

4956 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ವಾರ್ತಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮಾಹಿತಿ ಹಕ್ಕು ವಿಧೇಯಕವನ್ನು ತರುವ ಉದ್ದೇಶ ಸರ್ಕಾರಕ್ಕಿದೆಯೇ?

ಆ) ಇದರ ಸಾಧಕ ಬಾಧಕಗಳೇನು?

ಇ) ಇದರ ಗುಣಕ ಹಾಗೂ ಋಣಾತ್ಮಕ ಅಂಶಗಳ ಬಗ್ಗೆ ವಿವರಣೆ ನೀಡುವುದು?

ಈ) ಈ ವಿಧೇಯಕದಿಂದ ಶ್ರೀಸಾಮಾನ್ಯನಿಗೆ ಆಗುವ ಲಾಭವೇನು?

ಶ್ರೀ ಬಿ.ಕೆ. ಚಂದ್ರಶೇಖರ್ (ವಾರ್ತಾ ಸಚಿವರು) :

ಅ) ರಾಜ್ಯದಲ್ಲಿ ಮಾಹಿತಿ ಹಕ್ಕು ವಿಧೇಯಕದ ಆಧ್ಯಾದೇಶವನ್ನು ಹೊರಡಿಸಲಾಗಿದೆ.

ಆ), ಇ) ಮತ್ತು ಈ) ರಾಜ್ಯದ ನಾಗರೀಕರಿಗೆ ಮಾಹಿತಿಯನ್ನು ಪಡೆಯುವ ಅವಕಾಶದ ಹಕ್ಕಿಗಾಗಿ ಮತ್ತು ಆಡಳಿತದಲ್ಲಿ ಮುಕ್ತತೆ, ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಹೆಚ್ಚಿಸುವುದರಿಂದ ಮತ್ತು ಜನರು ಆಡಳಿತದಲ್ಲಿ ಪರಿಣಾಮಕಾರಿಯಾಗಿ ಭಾಗವಹಿಸುವುದನ್ನು ಖಚಿತ ಪಡಿಸಿಕೊಳ್ಳುವುದರಿಂದ ಮತ್ತು ಆ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅರ್ಥಪೂರ್ಣವಾಗಿ ಮಾಡಲು ಆಧ್ಯಾದೇಶವನ್ನು ಹೊರಡಿಸಲಾಗಿದೆ.

ರಾಜ್ಯದ ಹೆದ್ದಾರಿಗಳ ಸುಧಾರಣೆ

4957 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಹೆದ್ದಾರಿಗಳನ್ನು ಸುಧಾರಿಸಲು 500 ಕೋಟಿ ರೂಪಾಯಿಗಳ ನಿಧಿ ಸ್ಥಾಪಿಸುವ ಉದ್ದೇಶ ಸರ್ಕಾರದ ತೀರ್ಮಾನದಲ್ಲಿದೆಯೇ?

ಆ) ಈ ನಿಧಿ ಸ್ಥಾಪನೆಯ ಮುಖ್ಯ ಉದ್ದೇಶಗಳೇನು?

ಇ) ಹೆದ್ದಾರಿ ಸಮಸ್ಯೆ ಕುರಿತು ಅಧ್ಯಯನ ನಡೆಸಲು ರಾಜ್ಯ ಸರ್ಕಾರ ನೇಮಿಸಿದ್ದ ಕಾರ್ಯಪಡೆ ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೆ? ವರದಿಯಲ್ಲಿನ ಪ್ರಮುಖ ಅಂಶಗಳಾವುವು?

ಈ) ಕಾರ್ಯಪಡೆ ನೀಡಿರುವ ವರದಿಯ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ರಾಜ್ಯದ ಹೆದ್ದಾರಿಗಳನ್ನು ಸುಧಾರಿಸಲು ರಸ್ತೆ ನಿಧಿ ಸ್ಥಾಪಿಸುವ ಉದ್ದೇಶ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆಗಳು ಹಾಗೂ ಅವುಗಳ ಮೇಲೆ ಬರುವ ಸೇತುವೆಗಳ ನಿರ್ಮಾಣ / ಪುನರ್ ನಿರ್ಮಾಣ, ರಸ್ತೆ ಮತ್ತು ಸೇತುವೆಗಳ ನಿರ್ವಹಣೆ / ಅಭಿವೃದ್ಧಿ ಮುಖ್ಯ ಉದ್ದೇಶಗಳು.

ಇ) ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. ಲೋಕೋಪಯೋಗಿ ಇಲಾಖೆ ರಸ್ತೆಗಳ ಸಮಗ್ರ ಅಭಿವೃದ್ಧಿಗಾಗಿ ವರದಿಯ ಪ್ರಮುಖ ಅಂಶಗಳು ಕೆಳಕಂಡಂತೆ ಇವೆ;

ಲೋಕೋಪಯೋಗಿ ಇಲಾಖೆ ರಸ್ತೆಗಳ ವಿವರಗಳನ್ನು ಕಂಪ್ಯೂಟರ್‌ನಲ್ಲಿ ಅಳವಡಿಸುವುದು

ಲೋಕೋಪಯೋಗಿ ಇಲಾಖೆಯನ್ನು ನಿಗಮದ ಮಾದರಿಯಲ್ಲಿ ಕರ್ನಾಟಕ ರೋಡ್ ಬೋರ್ಡ್ ಆಗಿ ಪುನರ್ ರಚಿಸುವುದು

ಲೋಕೋಪಯೋಗಿ ಇಲಾಖೆಯ ರಸ್ತೆಗಳ ಅಭಿವೃದ್ಧಿ ಮತ್ತು ನಿರ್ವಹಣೆಗೆ ಕರ್ನಾಟಕ ರೋಡ್ ಫಂಡ್ ಸ್ಥಾಪಿಸಿ ಕರ್ನಾಟಕ ರಸ್ತೆ ನಿಧಿಯನ್ನು ವಿಶೇಷ ಸುಂಕದ ಮೂಲಕ ಕ್ರೋಢೀಕರಿಸುವುದು.

ಮುಖ್ಯವಾದ ಊರಿನ ರಸ್ತೆಗಳಿಗೆ ಬೈಪಾಸ್ ನಿರ್ಮಿಸುವುದು

ಇಲಾಖೆಯ ಇಂಜಿನಿಯರ್‌ಗಳಿಗೆ ತರಬೇತಿ ನೀಡಲು, ತಾಂತ್ರಿಕ ತೊಂದರೆಗಳಿಗೆ ಸಲಹೆ ನೀಡಲು, ಕರ್ನಾಟಕ ಹೈವೇ ರೀಸರ್ಚ್ ಸೆಂಟರ್ ಸ್ಥಾಪಿಸುವುದು.

ಪೂರ್ವಾನುಭವ ಇರುವ ಗುತ್ತಿಗೆದಾರರಿಗೆ ಮಾತ್ರ ಕಾಮಗಾರಿಗಳನ್ನು ವಹಿಸುವುದು.

ಈ) ವರದಿಯಲ್ಲಿರುವ ಅಂಶಗಳನ್ನು ಪರಿಶೀಲಿಸಲಾಗುತ್ತಿದೆ.

ದೊಡ್ಡಬಳ್ಳಾಪುರ ಕ್ಷೇತ್ರಕ್ಕೆ ನಬಾರ್ಡ್ ಯೋಜನೆ

4959 - ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ಕ್ಷೇತ್ರದಲ್ಲಿ ನಬಾರ್ಡ್ ವತಿಯಿಂದ ತೆಗೆದುಕೊಂಡು ಕನ್‌ಸ್ಟ್ರಕ್ಷನ್ ಕಾರ್ಪೋರೇಷನ್‌ಗೆ ಸೇರಿದ್ದು ನಂತರ ಗುತ್ತಿಗೆದಾರರನ್ನು ಬದಲಾಯಿಸಿದ್ದು ಇದುವರೆವಿಗೂ ಪ್ರಗತಿ ಕಂಡು ಬಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ಹಾಗೂ ಈ ಕೆಲಸವನ್ನು ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು) :